ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

**ಆತ್ಮಾವಲೋಕನ ಸಭೆ** ವಿಧಾನಸಭೆಗೆ ಶೇ.10ರಷ್ಟು ಗಣ್ಯರನ್ನು ನಾಮನಿರ್ದೇಶನ ಮಾಡಿ | ಪ್ರಾಮಾಣಿಕರಿಗೆ ಟಿಕೆಟ್ ಕೊಡಿ: ವಿವಿಧ ಕ್ಷೇತ್ರದ ತಜ್ಞರ ಸಲಹೆ

# ಅಭ್ಯರ್ಥಿಗಳ ಖರ್ಚನ್ನು ಸರ್ಕಾರವೇ ಭರಿಸಲಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಅಭ್ಯರ್ಥಿಗಳ ಚುನಾವಣೆ ಪ್ರಚಾರದ ವೆಚ್ಚವನ್ನು ಸರ್ಕಾರವೇ ವಹಿಸಿಕೊಳ್ಳಬೇಕು. ರಾಜಕೀಯ ಪಕ್ಷಗಳಲ್ಲಿ ಆಂತರಿಕ ಪ್ರಜಾಪ್ರಭುತ್ವ ಪುನರ್ ಸ್ಥಾಪನೆ ಆಗಬೇಕು. ವಿಧಾನಸಭೆಗೆ ವಿವಿಧ ಕ್ಷೇತ್ರಗಳ ಶೇ.10ರಷ್ಟು ಗಣ್ಯರನ್ನು ನಾಮಕರಣ ಮಾಡಬೇಕು. ಬದ್ಧತೆ ಇರುವ ಪ್ರಾಮಾಣಿಕರಿಗೆ ಟಿಕೆಟ್ ನೀಡಬೇಕು. ಪಕ್ಷಾಂತರ ನಿಷೇಧ ಕಾಯ್ದೆಯನ್ನು ಬಲಿಷ್ಠ ಮಾಡಬೇಕು. ಬದಲಾದ ಪರಿಸ್ಥಿತಿಯಲ್ಲಿ ಸದನದ ನಿಯಮಾವಳಿಗಳಲ್ಲಿ ಬದಲಾವಣೆ ತರಬೇಕು. ವರ್ಷಕ್ಕೆ 60 ದಿನ ಅಧಿವೇಶನ ನಡೆಯಲೇಬೇಕು...

ರಾಜ್ಯ ವಿಧಾನಮಂಡಲ ಹಾಗೂ ಕಾಮನ್‌ವೆಲ್ತ್ ಸಂಸದೀಯ ಸಂಘದ ಕರ್ನಾಟಕ ಶಾಖೆ ಬುಧವಾರ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಸಂಸದೀಯ ಮೌಲ್ಯಗಳ ಕುಸಿತ ತಡೆ ಕುರಿತ ಆತ್ಮಾವಲೋಕನ ಸಭೆಯಲ್ಲಿ ಮಾತನಾಡಿದ ನ್ಯಾಯಮೂರ್ತಿಗಳು, ಸಾಹಿತಿಗಳು, ಪತ್ರಕರ್ತರು, ಉಭಯ ಸದನಗಳ ಮಾಜಿ ಸಭಾಧ್ಯಕ್ಷರು, ಸಭಾಪತಿಗಳು ವ್ಯಕ್ತಪಡಿಸಿದ ಒಟ್ಟಾರೆ ಅಭಿಪ್ರಾಯವಿದು.

ಸುಮಾರು ಆರು ಗಂಟೆಗಳ ಕಾಲ ನಡೆದ ಸಭೆಯಲ್ಲಿ ಮಾತನಾಡಿದ ಗಣ್ಯರು, ಸಂಸದೀಯ ಮೌಲ್ಯಗಳು ದಿನದಿಂದ ದಿನಕ್ಕೆ ಕುಸಿತಗೊಳ್ಳುತ್ತಿರುವುದಕ್ಕೆ ತೀವ್ರ ಕಳವಳ, ಆತಂಕ ವ್ಯಕ್ತಪಡಿಸಿ, ಇದೇ ಪರಿಸ್ಥಿತಿ ಮುಂದುವರೆದರೆ ಜನರಿಗೆ ಸಂಸದೀಯ ವ್ಯವಸ್ಥೆಯ ಮೇಲಿನ ನಂಬಿಕೆ ಕುಸಿದು ಅರಾಜಕತೆಗೆ ದಾರಿ ಮಾಡಿಕೊಡುತ್ತದೆ. ಹಾಗಾಗಿ ರಾಜಕೀಯ ಪಕ್ಷಗಳು, ವೈಯಕ್ತಿಕ ನೆಲೆಯಲ್ಲಿ ರಾಜಕಾರಣಿಗಳು ಆತ್ಮಾವಲೋಕನ ಮಾಡಿಕೊಳ್ಳಬೇಕು. ಇದಕ್ಕೆ ಪೂರಕವಾಗಿ ಸದನದ ನಿಯಮಾವಳಿಗಳಲ್ಲಿ ಬದಲಾವಣೆ ತರಬೇಕು ಎಂದು ಸಲಹೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಅಧಿವೇಶನ ನಡೆಯುವ ಅವಧಿ ಸರ್ಕಾರದ ವಿವೇಚನೆ ಬದಲಿಗೆ ಸಭಾಧ್ಯಕ್ಷರ ವ್ಯಾಪ್ತಿಯಲ್ಲಿ ಇರುವಂತಾಗಬೇಕು. ಕಲಾಪಕ್ಕೆ ಅಡ್ಡಿ ಉಂಟು ಮಾಡುವ ಕೃತ್ಯ ದಂಡನಾರ್ಹ ಅಪರಾಧ ಎಂದು ಪರಿಗಣಿಸಬೇಕು. ಪಕ್ಷಾಂತರ ನಿಷೇಧ ಕಾಯ್ದೆ ಮರು ಪರಿಶೀಲಿಸಬೇಕು ಎಂದರು.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮಾತನಾಡಿ, ಸ್ವಾತಂತ್ರ್ಯ ಪೂರ್ವದಲ್ಲಿ ಮುತ್ಸದ್ದಿಗಳು ದೇಶಕ್ಕಾಗಿ ನಾನು ಎಂಬ ಮನೋಭಾವನೆ ಹೊಂದಿದ್ದರು. ಆದರೆ ಸ್ವಾತಂತ್ರ್ಯ ನಂತರದಲ್ಲಿ ದೇಶ ಇರುವುದೇ ನನಗಾಗಿ ಎಂದು ಯೋಚಿಸಲು ಆರಂಭಿಸಿದ ಪರಿಣಾಮ ಇಂತಹ ದುಸ್ಥಿತಿಗೆ ಬಂದಿದ್ದೇವೆ ಎಂದು ವಿಷಾದಿಸಿದರು.

ನಿವೃತ್ತ ನ್ಯಾಯಮೂರ್ತಿ ಎನ್. ಕುಮಾರ್, ಮೇಲ್ಮನೆ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿದರು. ಡಿಸಿಎಂ ಗೋವಿಂದ ಕಾರಜೋಳ, ಮೇಲ್ಮನೆ ಮಾಜಿ ಸಭಾಪತಿಗಳಾದ ಡಿ.ಎಚ್. ಶಂಕರಮೂರ್ತಿ, ಬಿ.ಎಲ್. ಶಂಕರ್, ವಿ.ಆರ್. ಸುದರ್ಶನ್, ಮೇಲ್ಮನೆ ಪ್ರತಿಪಕ್ಷದ ನಾಯಕ ಎಸ್.ಆರ್. ಪಾಟೀಲ್, ಶಿಕ್ಷಣ ತಜ್ಞ ಡಾ. ಗುರುರಾಜ ಕರ್ಜಗಿ, ವಿದ್ವಾಂಸ ಶತಾವಧಾನಿ ಗಣೇಶ್, ಸಾಹಿತಿ ನರಹಳ್ಳಿ ಬಾಲಸುಬ್ರಹ್ಮಣ್ಯ ಮುಮಂತಾದವರು ಸಂಸದೀಯ ವ್ಯವಸ್ಥೆಯಲ್ಲಿ ಮೌಲ್ಯಗಳ ಕುಸಿತ ತಡೆಗಟ್ಟುವ ಸಂಬಂಧ ವಿವಿಧ ಸಲಹೆಗಳನ್ನು ನೀಡಿದರು.

## ಸರ್ಕಾರವೇ ಚುನಾವಣೆ ನಡೆಸಲಿ: ಸಿದ್ದು



**ಬೆಂಗಳೂರು:** ಚುನಾವಣಾ ವ್ಯವಸ್ಥೆ ಬದಲಾವಣೆ ಆಗದೆ ಸಂಸದೀಯ ವ್ಯವಸ್ಥೆಯಲ್ಲಿ ಮೌಲ್ಯಗಳ ಪುನರ್ ಸ್ಥಾಪನೆ ಅಸಾಧ್ಯವಾಗಿದೆ. ಹೀಗಾಗಿ ಚುನಾವಣೆಯನ್ನು ಸರ್ಕಾರವೇ ನಡೆಸುವಂತಹ ವ್ಯವಸ್ಥೆ ಬರಬೇಕು ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಬುಧವಾರ ವಿಧಾನಸೌಧದಲ್ಲಿ ಆಯೋಜಿಸಿದ್ದ 'ಸಂಸದೀಯ ಮೌಲ್ಯಗಳ ಕುಸಿತವನ್ನು ತಡೆಗಟ್ಟುವ ನಿಟ್ಟಿನಲ್ಲಿ ಒಂದು ಆತ್ಮಾವಲೋಕನ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದುಡ್ಡಿದ್ದವರು, ಜಾತಿ ಇದ್ದವರು, ಅಪರಾಧಿಗಳು, ಹೊಡಿ- ಬಡಿ ಎನ್ನುವವರು ಗೆದ್ದು ಬಂದರೆ ಮೌಲ್ಯಗಳು ಹೇಗೆ ಉಳಿದುಕೊಳ್ಳಲು ಸಾಧ್ಯ? ಆದ್ದರಿಂದ ರಾಜಕೀಯ ಪಕ್ಷಗಳಲ್ಲಿ ಸಹ ದೊಡ್ಡ ಬದಲಾವಣೆ ಆಗಬೇಕಾಗಿದೆ ಎಂದರು.